ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಮುಖ್ಯಾಂಶ 6

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE 30/3/21

# ಲಾಕ್‌ಡೌನ್ ಇಲ್ಲವೇ ಇಲ್ಲ । ಹದಿನೈದು ದಿನ ಕಠಿಣ ಕ್ರಮ
# ಶಾಲೆ, ಕಾಲೇಜುಗಳು ಮುಚ್ಚಲ್ಲ । ಮದುವೆಗಳ ಮೇಲೆ ನಿಗಾ

# ಪಾರ್ಟಿ, ಪ್ರೊಟೆಸ್ಟ್ ಬಂದ್!

30-3-21

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯಾದ್ಯಂತ ಕರೊನಾ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮತ್ತೆ ಲಾಕ್‌ಡೌನ್ ಜಾರಿಗೊಳಿಸುವ ಬದಲಾಗಿ 15 ದಿನ ಇನ್ನಷ್ಟು ಕಠಿಣ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಬೆಂಗಳೂರಿನಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚುತ್ತಿರುವ ಕುರಿತು ಸಚಿವರು, ಸರ್ಕಾರದ ಹಿರಿಯ ಅಧಿಕಾರಿಗಳು, ಬಿಬಿಎಂಪಿ ಅಧಿಕಾರಿಗಳು ಹಾಗೂ ತಾಂತ್ರಿಕ ಸಲಹಾ ಸಮಿತಿಯ ಸದಸ್ಯರೊಂದಿಗೆ ಸಭೆ ನಡೆಸಿದ ಬಳಿಕ ಸಿಎಂ ಯಡಿಯೂರಪ್ಪ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು. ಮತ್ತೆ ಲಾಕ್‌ಡೌನ್ ಮಾಡುವುದಿಲ್ಲ ಎಂದು ಪುನರುಚ್ಚರಿಸಿದ ಅವರು, ಶಾಲೆ-ಕಾಲೇಜು ಮುಚ್ಚುವುದಿಲ್ಲ ಎಂದು ಸ್ಪಷ್ಟಪಡಿಸುವ ಮೂಲಕ ಈ ಕುರಿತು ಎದ್ದಿದ್ದ ಎಲ್ಲ ಗೊಂದಲಗಳಿಗೆ ತೆರೆ ಎಳೆದರು.

ಕರೊನಾ ಎಮರ್ಜೆನ್ಸಿ EMERGENCY

ಲಾಕ್‌ಡೌನ್, ನೈಟ್ ಕರ್ಫ್ಯೂ ಹೇರುವ ಕುರಿತ ಊಹಾಪೋಹಗಳ ಹಿನ್ನೆಲೆಯಲ್ಲಿ ಈ ಸಭೆ ಕುತೂಹಲ ಕೆರಳಿಸಿತ್ತು. 'ಇಂದಿನಿಂದ 15 ದಿನ ಯಾವುದೇ ಸತ್ಯಾಗ್ರಹ/ಚಳವಳಿ ಹಾಗೂ ಅಪಾರ್ಟ್‌ಮೆಂಟ್‌ನಲ್ಲಿ ಪಾರ್ಟಿ ಮಾಡುವುದಕ್ಕೂ ಅವಕಾಶ ಇಲ್ಲ ಎಂದು ಸಿಎಂ ಸ್ಪಷ್ಟಪಡಿಸಿದರು. ಮಕ್ಕಳು ಮನೆಯಲ್ಲೇ ಇದ್ದರೆ ಕುಣಿದು ಕುಪ್ಪಳಿಸುತ್ತವೆ. ಶಾಲೆ-ಕಾಲೇಜುಗಳಲ್ಲಿ ಶಿಸ್ತಿನಿಂದ ಇರುತ್ತಾರೆ. ಹಾಗಾಗಿ ಯಾವುದೇ ಶಾಲೆ-ಕಾಲೇಜುಗಳನ್ನು ಮುಚ್ಚುವುದು ಸರಿಯಲ್ಲ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಆ ದೃಷ್ಟಿಯಿಂದ ಶಾಲೆ-ಕಾಲೇಜುಗಳನ್ನು ಮುಚ್ಚುವುದಿಲ್ಲ. ಮದುವೆ ಸಮಾರಂಭದಲ್ಲಿ ಬಿಗಿಯಾದ ಕ್ರಮ ತೆಗೆದುಕೊಳ್ಳುತ್ತೇವೆ. ಯಾವುದೇ ಮದುವೆಗಳಲ್ಲೂ 400, 500 ಜನ ಸೇರುವಂತಿಲ್ಲ ಎಂದು ಎಚ್ಚರಿಸಿದರು.

» ಪುಟ 4

**ಪರೀಕ್ಷೆ ನಡೆಸದೆಯೇ 1ರಿಂದ 9ನೇ ತರಗತಿ ಮಕ್ಕಳನ್ನು ಪಾಸ್ ಮಾಡುವ ನಿರ್ಧಾರ ಕೈಗೊಂಡಿಲ್ಲ.**

। ಬಿ.ಎಸ್. ಯಡಿಯೂರಪ್ಪ ಸಿಎಂ



ಸೋಮವಾರ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಸಿಎಂ ಯಡಿಯೂರಪ್ಪ, ಸಚಿವರಾದ ಆರ್.ಅಶೋಕ್, ಸುರೇಶ್ ಕುಮಾರ್ ಹಾಗೂ ಡಾ.ಕೆ. ಸುಧಾಕರ್.

## ಮುಖ್ಯಾಂಶಗಳು

- 15 ದಿವಸ ಪ್ರತಿಭಟನೆ, ಸತ್ಯಾಗ್ರಹಕ್ಕೆ ಅವಕಾಶವಿರುವುದಿಲ್ಲ
- ಬೆಂಗಳೂರು ನಗರ, ಗ್ರಾಮಾಂತರ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ 1166 ಬೆಡ್ ಮೀಸಲಿಡಲಾಗಿದೆ. ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ಹಾಸಿಗೆ ಒದಗಿಸಲಾಗುವುದು
- ಚಿಕಿತ್ಸೆಗೆ ಹಾಸಿಗೆಗಳನ್ನು ಒದಗಿಸಲು ಸಿದ್ಧರಿರುವಂತೆ ಖಾಸಗಿ ಆಸ್ಪತ್ರೆಗಳಿಗೆ ತಿಳಿಸಲಾಗಿದೆ
- ಕೋವಿಡ್ ನಿರ್ವಹಣೆಗೆ ಅನುದಾನದ ಕೊರತೆ ಇಲ್ಲ. ಈಗಾಗಲೇ 150 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಅಗತ್ಯಬಿದ್ದಲ್ಲಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲಾಗುವುದು
- ಸಾರ್ವಜನಿಕರು ಜಾಗೃತರಾಗಿ, ಮಾಸ್ಕ್ ಧಾರಣೆ, ಸಾಮಾಜಿಕ ಅಂತರ ಕಾಪಾಡುವುದು ಮತ್ತು ಇತರ ಮುನ್ನೆಚ್ಚರಿಕೆ ಕ್ರಮಗಳನ್ನು ಕಡ್ಡಾಯವಾಗಿ ಕೈಗೊಳ್ಳಬೇಕು
- ಹೆಚ್ಚಿನ ಸಂಖ್ಯೆಯಲ್ಲಿ ಗುಂಪುಗೂಡುವುದನ್ನು ತಡೆಗಟ್ಟಿ ರಾಜ್ಯಾದ್ಯಂತ ಕೋವಿಡ್ ನಿಯಂತ್ರಣ ಕಾರ್ಯಕ್ಕೆ ಸಹಕರಿಸಬೇಕು
- ಕೇರಳ, ಮಹಾರಾಷ್ಟ್ರದಿಂದ ಬರುವ ಪ್ರಯಾಣಿಕರಿಗೆ ಆರ್‌ಟಿಪಿಸಿಆರ್ ಪರೀಕ್ಷೆ ನೆಗೆಟಿವ್ ವರದಿ ಕಡ್ಡಾಯ. ಪ್ರಯಾಣಿಕರು ಇದನ್ನು ಕಟ್ಟುನಿಟ್ಟಾಗಿ ಪಾಲಿಸಲು ಕೋರಿದೆ

» ಪುಟ 4

## 2 ಸಾವಿರ ಕಡೆ ಲಸಿಕೆ

ಬೆಂಗಳೂರು: ರಾಜ್ಯದ ಎರಡು ಸಾವಿರ ಹೆಲ್ತ್ ಅಂಡ್ ವೆಲ್‌ನೆಸ್ ಸೆಂಟರ್‌ಗಳಲ್ಲಿ ಸೋಮವಾರದಿಂದ ಲಸಿಕೆ ಕೊಡಲಾಗುತ್ತಿದ್ದು, ಪ್ರತಿ ಸೆಂಟರ್‌ನಲ್ಲಿ ದಿನಕ್ಕೆ 50 ಜನಕ್ಕೆ ಲಸಿಕೆ ನೀಡಲು ವ್ಯವಸ್ಥೆ ಮಾಡಲಾಗಿದೆ ಎಂದು ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಹೇಳಿದರು. ಜನರು ಸ್ವಯಂಪ್ರೇರಿತರಾಗಿ ಲಸಿಕೆ ಹಾಕಿಸಿಕೊಳ್ಳಬೇಕು. ರಾಜ್ಯದಲ್ಲಿ ನಿತ್ಯ ಮೂರು ಸಾವಿರಕ್ಕೂ ಹೆಚ್ಚು ಪ್ರಕರಣಗಳು ಪತ್ತೆಯಾಗುತ್ತಿವೆ. ಕರೊನಾ ಸೋಂಕು ಬಹಳ ಬೇಗ ಹೋಗುತ್ತದೆ ಎಂದು ನಮಗೆ ಅನಿಸುತ್ತಿಲ್ಲ. ಆದ್ದರಿಂದ ನಾವು ಎಚ್ಚರಿಕೆಯಿಂದಿರಬೇಕೆಂದು ಸೋಮವಾರ ಸುದ್ದಿಗಾರರಿಗೆ ತಿಳಿಸಿದರು.



» ಪ್ರತಿ ಹೆಲ್ತ್ ಅಂಡ್ ವೆಲ್‌ನೆಸ್ ಕೇಂದ್ರದಲ್ಲಿ 50 ಜನರಿಗೆ ವ್ಯಾಕ್ಸಿನ್

## ಮದುವೆ ಸಮಾರಂಭ ಕಟ್ಟುನಿಟ್ಟು

ಕಲ್ಯಾಣ ಮಂಟಪಗಳಲ್ಲಿ ಮದುವೆ ಮತ್ತಿತರ ಸಮಾರಂಭ ನಡೆಸುವುದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಈ ಮೊದಲು ನಿಯಮ ಉಲ್ಲಂಘಿಸಿದರೆ ಸಮಾರಂಭ ನಡೆಸುವವರ ಮೇಲಷ್ಟೇ ಕಾನೂನು ಕ್ರಮ ಜರುಗಿಸಲಾಗುತ್ತಿತ್ತು. ಇನ್ನು ಮುಂದೆ ಕಲ್ಯಾಣ ಮಂಟಪದ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲಾಗುವುದಲ್ಲದೆ, 6 ತಿಂಗಳು ಕಲ್ಯಾಣ ಮಂಟಪವನ್ನು ಮುಚ್ಚಿಸಲಾಗುವುದು.

। ಆರ್. ಅಶೋಕ್ ಕಂದಾಯ ಸಚಿವ

## ಚೀನಾಕ್ಕೆ ಕರೊನಾ ಕ್ಲೀನ್‌ಚಿಟ್!

ಡಬ್ಲ್ಯುಎಚ್‌ಒ ವರದಿ 10